**ಪ್ರ ದ ನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಕುಶಾಲನಗರ**

**ಸಿ ಸಿ ನಂಃ 786/2024**

ಸಾಕ್ಷಿಯ ಹೆಸರು: ಹರೀಶ್ ವಿ ಕೆ

ತಂದೆ /ಗಂಡನ ಹೆಸರು : ಕುಕ್ರಶೆಟ್ಟಿ

ವಯಸ್ಸು : 55

ಉದ್ಯೋಗ : ಎ ಎಸ್ ಐ ಶ್ರೀಮಂಗಲ ಪೊಲೀಸ್ ಠಾಣೆ

ವಾಸ ಸ್ಥಳ : ಶ್ರೀಮಂಗಲ

ಚಾಸಾ 20ಃ

ಪ್ರಾಸಾ ಃ 4

**ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಿ ಪ್ರಮಾಣೀಕರಿಸಿದ ದಿಃ 07.02.2026**

**ಮುಖ್ಯ ವಿಚಾರಣೆಃ ಎ ಪಿ ಪಿ ಯವರಿಂದ**

ನಾನು 2020 ರಿಂದ ರಿಂದ 2025 ರವರೆಗೆ ಕುಶಾಲನಗರದ ಸಂಚಾರ ಪೋಲಿಸ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 21.01.2024 ರಂದು ನಾನು ಠಾಣ ಪ್ರಭಾರದಲ್ಲಿದ್ದಾಗ ಚಾಸಾ 1 ರವರು ಸಂಜೆ 5.00 ಗಂಟೆಗೆ ಠಾಣೆಗೆ ಹಾಜರಾಗಿ ಬೆರಳಚ್ಚು ಮಾಡಿಸಿದ ದೂರನ್ನು ತಂದು ಕೊಟ್ಟಿದ್ದು ದೂರಿನ ಆದಾರದ ಮೇಲೆ ಠಾಣಾ ಗುನ್ನಾ ನಂ 6/2024 ರಂತೆ ಪ್ರಕರಣವನ್ನು ದಾಖಲಿಸಿ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇಧಿಸಿಕೊಂಡಿರುತ್ತೇನೆ. ನಂತರ ದಿಃ 22.02.2024 ರಂದು ಚಾಸಾ 21 ರವರು ನನ್ನನ್ನು ಹಾಗೂ ಚಾಸಾ 15 ರವರನ್ನು ಮಡಿಕೇರಿ ಸರಕಾರರಿ ಆಸ್ಪತ್ರೆಗೆ ಕಳುಹಿಸಿಕೊಟ್ಟಿದ್ದು ನಾನು ಬೆಳಗ್ಗೆ 8.30 ಗಂಟೆಯಿಂದ 10.30 ಗಂಟೆಯವರೆಗೆ ಶವ ಪಂಚನಾಮೆಯನ್ನು ಪಂಚರಾದ ಚಾಸಾ 7 ರಿಂದ 9 ರ ಸಮಕ್ಷಮ ಜರುಗಿಸಿರುತ್ತೇನೆ. ಹಾಗೂ ಸದರಿ ವರದಿಯನ್ನು ಚಾಸಾ 21 ರವರ ಮುಂದೆ ತಂದು ಹಾಜರುಪಡಿಸಿರುತ್ತೇನೆ.

ಸಾಕ್ಷಿಗೆ ಚಾಸಾ 1 ರವರು ನೀಡಿದ ದೂರನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ದೂರನ್ನು ನಿಪಿ 6 ಎಂದು, ಸಾಕ್ಷಿಯ ಸಹಿಯನ್ನು ನಿಪಿ 6ಎ ಎಂದು ಗುರುತಿಸಲಾಯಿತು. ಸಾಕ್ಷಿಗೆ ಪ್ರ ವ ವ ನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ಪ್ರ ವ ವ ನ್ನು ನಿಪಿ 7 ಎಂದು, ಸಾಕ್ಷಿಯ ಸಹಿಯನ್ನು ನಿಪಿ 7ಎ ಎಂದು ಗುರುತಿಸಲಾಯಿತು. ಸಾಕ್ಷಿಗೆ ಶವ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ಶವ ಪಂಚನಾಮೆಯನ್ನು ನಿಪಿ 8 ಎಂದು, ಸಾಕ್ಷಿಯ ಸಹಿಯನ್ನು ನಿಪಿ 8ಎ ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ ಆರ್ ಜೆ ವಕೀಲರಿಂದ**

ನಿಪಿ 6 ನ್ನು ಎಲ್ಲಿ ಬೆರಳಚ್ಚು ಮಾಡಿಸಲಾಯಿತು ಎಂದು ನನಗೆ ಗೊತ್ತಿಲ್ಲ. ನಿಪಿ 6 ನ್ನು ಯಾರು ಬರಳಚ್ಚು ಮಾಡಿಸಲಾಯಿತು ಎಂದು ಕೇಳಿ ತಿಳಿದುಕೊಳ್ಳಲು ತೊಂದರೆ ಇತ್ತಾ ಎಂದರೆ ಅವಶ್ಯಕತೆ ಇರುವುದಿಲ್ಲ. ನಿಪಿ 6 ನ್ನು ನಮ್ಮ ಠಾಣೆಯಲ್ಲಿ ಬೆರಳಚ್ಚು ಮಾಡಿಸಿರುವ ಕಾರಣ ಕೇಳಿ ತಿಳಿದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಹೇಳಿದ ದಿನಾಂಕದಂದು ಯಾವುದೆ ಶವ ಪಂಚನಾಮೆಯನ್ನು ಮಾಡಿರುವುದಿಲ್ಲ ಹಾಗೂ ಯಾವುದೆ ವರದಿಯನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ 6 ರಿಂದ 8 ನ್ನು ನಾನು ಈ ಪ್ರಕರಣಕ್ಕೆ ಪೂರಕವಾದಂತೆ ಸೃಷ್ಟಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೂ ಮತ್ತು ಈ ಪ್ರಕರಣಕ್ಕೂ ಯಾವುದೆ ಸಂಬಂದ ಇರುವುದಿಲ್ಲ ಎಂದರೆ ಸರಿಯಲ್ಲ. ದೂರುದಾರರಿಗೆ ಸಹಾಯವಾಗಲೆಂದು ನಿಪಿ 6 ರಿಂದ 8 ನ್ನು ಸೃಷ್ಟಿಸಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.)

ಓದಿ ಹೇಳಿ ಕೇಳಿ ಸರಿ ಇದೆ.

ಸಹಿ/-

ಪ್ರ ದ ನ್ಯಾದಂ, ಕುಶಾಲನಗರ.